All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

05.03.2026 19.35 p.m.

**************

ಮುಖ್ಯಾಂಶಗಳು

೧. ಪರಿಸರ, ವಲಸೆ ಸೇರಿ ವಿವಿಧ ಕ್ಷೇತ್ರಗಳಲ್ಲಿ ಭಾರತ-ಫಿನ್‌ಲ್ಯಾಂಡ್ ಹಲವು ಒಪ್ಪಂದಗಳಿಗೆ ಸಹಿ

೨. ರೈಸಿನಾ ಸಂವಾದದ ೧೧ನೇ ಆವೃತ್ತಿಗೆ ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಚಾಲನೆ

೩. ರಾಜ್ಯಸಭಾ ಚುನಾವಣೆಗೆ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ನಾಮಪತ್ರ ಸಲ್ಲಿಕೆ

೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್: ಎರಡನೇ ಸೆಮಿಫೈನಲ್ ಪಂದ್ಯದಲ್ಲಿಂದು ಭಾರತ ವಿರುದ್ಧ ಟಾಸ್ ಗೆದ್ದ ಇಂಗ್ಲೆಂಡ್ ಫೀಲ್ಡಿಂಗ್ ಆಯ್ಕೆ

**************

ಪರಿಸರ ಸಹಕಾರ, ವಲಸೆ ಸೇರಿದಂತೆ ವಿವಿಧ ಕ್ಷೇತ್ರದಲ್ಲಿ ಭಾರತ ಮತ್ತು ಫಿನ್‌ಲ್ಯಾಂಡ್ ಹಲವು ಒಪ್ಪಂದಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡಿವೆ.

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಇಂದು ಫಿನ್‌ಲ್ಯಾಂಡ್ ಅಧ್ಯಕ್ಷ ಅಲೆಗ್ಸಾಂಡರ್ ಸ್ಟಬ್ ಅವರೊಂದಿಗೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವ ಕುರಿತು ಚರ್ಚಿಸಿದರು.

ಇದೇ ವೇಳೆ, ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಉಭಯ ನಾಯಕರು ತಮ್ಮ ವಿಚಾರ ವಿನಿಮಯ ಮಾಡಿಕೊಂಡರು. ನಂತರ ನಡೆದ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಇಂದು ಜಗತ್ತು ಅಸ್ಥಿರತೆ ಮತ್ತು ಅನಿಶ್ಚಿತತೆಯ ಹಂತದಲ್ಲಿ ಸಾಗುತ್ತಿದೆ. ಉಕ್ರೇನ್‌ನಿಂದ ಪಶ್ಚಿಮ ಏಷ್ಯಾದವರೆಗೆ ಪ್ರಪಂಚಾದ್ಯಂತ ಹಲವಾರು ಪ್ರದೇಶಗಳು ನಿರಂತರ ಸಂಘರ್ಷಗಳಿಗೆ ಸಾಕ್ಷಿಯಾಗುತ್ತಿವೆ ಎಂದು ಹೇಳಿದರು.

ಇಂತಹ ಸನ್ನಿವೇಶದಲ್ಲಿ ಎರಡು ಪ್ರಮುಖ ರಾಜತಾಂತ್ರಿಕ ಶಕ್ತಿಗಳಾದ ಭಾರತ ಮತ್ತು ಯೂರೋಪ್ ತಮ್ಮ ಸಂಬಂಧಗಳಲ್ಲಿ ಸುವರ್ಣ ಯುಗವನ್ನು ಪ್ರವೇಶಿಸುತ್ತಿವೆ. ಭಾರತ ಮತ್ತು

ಯೂರೋಪ್ ನಡುವೆ ಬೆಳೆಯುತ್ತಿರುವ ಸಹಕಾರವು ಜಾಗತಿಕ ಸ್ಥಿರತೆ, ಅಭಿವೃದ್ಧಿ ಮತ್ತು ಸಮೃದ್ಧಿಯನ್ನು ಬಲಪಡಿಸುತ್ತಿದೆ ಎಂದರು.

ಮಿಲಿಟರಿ ಸಂಘರ್ಷವು ಯಾವುದೇ ಸಮಸ್ಯೆಯನ್ನು ಪರಿಹರಿಸಲು ಸಾಧ್ಯವಿಲ್ಲ ಎಂಬುದನ್ನು ಭಾರತ ಮತ್ತು ಫಿನ್‌ಲ್ಯಾಂಡ್ ಸಂಪೂರ್ಣವಾಗಿ ಒಪ್ಪುತ್ತವೆ. ಸಂಘರ್ಷವನ್ನು ಶೀಘ್ರವಾಗಿ ಕೊನೆಗಣಿಸಲು ಎಲ್ಲ ಪ್ರಯತ್ನಗಳನ್ನು ಬೆಂಬಲಿಸುತ್ತಲೇ ಇರುತ್ತವೆ ಎಂದು ತಿಳಿಸಿದರು.

೨೦೨೬ರ ಆರಂಭದಲ್ಲಿ ಐತಿಹಾಸಿಕ ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಈ ಒಪ್ಪಂದವು ಭಾರತ-ಫಿನ್‌ಲ್ಯಾಂಡ್ ನಡುವೆ ವ್ಯಾಪಾರ, ಹೂಡಿಕೆ ಮತ್ತು ತಾಂತ್ರಿಕ ಸಹಕಾರವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

**************

ಭಾರತದ ಪ್ರಮುಖ ಭೌಗೋಳಿಕ ರಾಜಕೀಯ ಮತ್ತು ಆರ್ಥಿಕ ಸಮ್ಮೇಳನವಾದ ರೈಸಿನಾ ಸಂವಾದದ ೧೧ನೇ ಆವೃತ್ತಿಗೆ ನವದೆಹಲಿಯಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದರು.

ಸಂವಾದದ ಭಾಗವಾಗಿ ಹಲವು ಜಾಗತಿಕ ವಿಷಯಗಳ ಕುರಿತ ಅಧಿವೇಶನಗಳು ಪ್ರಗತಿಯಲ್ಲಿವೆ. ಮೂರು ದಿನಗಳ ಕಾಲ ನಡೆಯಲಿರುವ ಈ ಜಾಗತಿಕ ಸಮ್ಮೇಳನದಲ್ಲಿ ವಿಶ್ವದ ವಿವಿಧ ದೇಶಗಳ ನಾಯಕರು, ನೀತಿ ನಿರೂಪಕರು ಮತ್ತು ತಜ್ಞರು ಭಾಗವಹಿಸಿದ್ದಾರೆ.

ಸಮಾರಂಭದಲ್ಲಿ ಫಿನ್‌ಲ್ಯಾಂಡ್ ಅಧ್ಯಕ್ಷ ಡಾ.ಅಲೆಗ್ಸಾಂಡರ್ ಸ್ಟಬ್ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಭಾಷಣ ಮಾಡಿದರು. ೨೦೨೬ರ ಈ ಆವೃತ್ತಿಯು 'ಸಂಸ್ಕಾರ - ಪ್ರತಿಪಾದನೆ, ಹೊಂದಾಣಿಕೆ, ಪ್ರಗತಿ' ಎಂಬ ಪರಿಕಲ್ಪನೆಯಡಿ ನಡೆಯುತ್ತಿದ್ದು, ಇದು ಪ್ರಸ್ತುತ ಜಾಗತಿಕ ವಿದ್ಯಮಾನಗಳ ಪ್ರತಿಬಿಂಬವಾಗಿದೆ. ಅಬ್ಸರ್ವರ್ ರಿಸರ್ಚ್ ಫೌಂಡೇಶನ್ ಮತ್ತು ಭಾರತ ಸರ್ಕಾರದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಸಹಯೋಗದೊಂದಿಗೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

**************

ಜನಗಣತಿ ೨೦೨೭ ಕ್ಕಾಗಿ ಮಹಿಳೆಯರು ಮತ್ತು ಪುರುಷರನ್ನು ಸಂಕೇತಿಸುವ ನಾಲ್ಕು ಡಿಜಿಟಲ್ ಪರಿಕರಗಳನ್ನು ಹಾಗೂ ಪ್ರಗತಿ ಮತ್ತು ವಿಕಾಸ್ ಎಂಬ ಮ್ಯಾಸ್ಕಾಟ್‌ಗಳನ್ನು ನವದೆಹಲಿಯಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅನಾವರಣಗೊಳಿಸಿದರು.

ಪರಿಕರಗಳಲ್ಲಿ ಹೌಸ್ ಲಿಸ್ಟಿಂಗ್ ಬ್ಲಾಕ್ ಕ್ರಿಯೇಟರ್ ವೆಬ್ ಅಪ್ಲಿಕೇಶನ್, ಎಚ್‌ಎಲ್‌ಒ ಮೊಬೈಲ್ ಅಪ್ಲಿಕೇಶನ್, ಸ್ವಯಂ ಗಣತಿ ಪೋರ್ಟಲ್ ಹಾಗೂ ಜನಗಣತಿ ನಿರ್ವಹಣೆ ಮತ್ತು ಮೇಲ್ವಿಚಾರಣಾ ವ್ಯವಸ್ಥಾ ಪೋರ್ಟಲ್ ಸೇರಿವೆ. ದೇಶಾದ್ಯಂತ ಜನಗಣತಿ ಕಾರ್ಯವನ್ನು ಸುಗಮಗೊಳಿಸಲು ಸೆಂಟರ್ ಫಾರ್ ಡೆವಲಪ್‌ಮೆಂಟ್ ಆಫ್ ಅಡ್ವಾನ್ಸ್ಡ್ ಕಂಪ್ಯೂಟಿಂಗ್ ಎಂಬ ಸುಧಾರಿತ ಡಿಜಿಟಲ್ ವೇದಿಕೆಯನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ಮಾಹಿತಿ ನೀಡಿದೆ.

ಜನಗಣತಿ ೨೦೨೭ ಅನ್ನು ಎರಡು ಹಂತದಲ್ಲಿ ನಡೆಸಲಾಗುವುದು. ಜನಗಣತಿಯನ್ನು ಮೊದಲ ಬಾರಿಗೆ ಡಿಜಿಟಲ್ ಆಗಿ ನಡೆಸಲಾಗುವುದು ಮತ್ತು ಸ್ವಯಂ ಗಣತಿಯ ಆಯ್ಕೆ ಲಭ್ಯವಿರುತ್ತದೆ ಎಂದು ಸಚಿವಾಲಯ ತಿಳಿಸಿದೆ.

**************

ಬಿಹಾರ ಮುಖ್ಯಮಂತ್ರಿ ಹಾಗೂ ಜೆಡಿಯು ಅಧ್ಯಕ್ಷ ನಿತೀಶ್ ಕುಮಾರ್ ಅವರು ಇಂದು ರಾಜ್ಯಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸಿದರು. ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರ ಸಮ್ಮುಖದಲ್ಲಿ ಬಿಹಾರ ವಿಧಾನಸಭೆಯಲ್ಲಿ ನಾಮಪತ್ರ ಸಲ್ಲಿಸಲಾಯಿತು.

ಇದಕ್ಕೂ ಮುನ್ನ ಸಾಮಾಜಿಕ ಜಾಲತಾಣದಲ್ಲಿ ನಿತೀಶ್ ಕುಮಾರ್, ಬಿಹಾರ ವಿಧಾನಸಭೆಯ ಎರಡು ಸದನಗಳು ಹಾಗೂ ಸಂಸತ್ತಿನ ಎರಡು ಸದನಗಳ ಸದಸ್ಯರಾಗುವುದು ತಮ್ಮ ಬಯಕೆ ಎಂದು ಹೇಳಿದ್ದಾರೆ.

ಎರಡು ದಶಕಗಳಿಗೂ ಹೆಚ್ಚು ಕಾಲ ಬಿಹಾರದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಲು ತಮ್ಮ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

ಇನ್ನೊಂದೆಡೆ, ಕೆಲವು ಜೆಡಿಯು ಕಾರ್ಯಕರ್ತರು ಪಾಟ್ನಾದಲ್ಲಿರುವ ಮುಖ್ಯಮಂತ್ರಿಗಳ ನಿವಾಸದ ಹೊರಗೆ ಪ್ರತಿಭಟನೆ ನಡೆಸಿ, ರಾಜ್ಯಸಭೆಗೆ ನಾಮಪತ್ರ ಸಲ್ಲಿಸದಂತೆ ನಿತೀಶ್ ಕುಮಾರ್ ಅವರಿಗೆ ಒತ್ತಾಯಿಸಿದರು.

**************

ಮಹಾರಾಷ್ಟ್ರದಿಂದ ರಾಜ್ಯಸಭಾ ಚುನಾವಣೆಗೆ ತಮ್ಮ ಪಕ್ಷದ ಅಭ್ಯರ್ಥಿಯಾಗಿ ಜ್ಯೋತಿ ವಾಗ್ಮೊರೆ ಅವರನ್ನು ಶಿವಸೇನೆ ನಾಮನಿರ್ದೇಶನ ಮಾಡಿದೆ. ಇದೇ ವೇಳೆ, ಪಾರ್ಥ್ ಪವಾರ್ ಅವರನ್ನು ರಾಜ್ಯಸಭಾ ಚುನಾವಣೆಗೆ ಎನ್‌ಸಿಪಿ ನಾಮನಿರ್ದೇಶನ ಮಾಡಿದೆ.

ಮಹಾ ವಿಕಾಸ್ ಅಘಾಡಿ ಪ್ರತಿನಿಧಿಸುವ ಅಭ್ಯರ್ಥಿಯಾಗಿ ಹಿರಿಯ ನಾಯಕ ಶರದ್ ಪವಾರ್ ಅವರನ್ನು ಮರುನಾಮಕರಣ ಮಾಡಲಾಗಿದೆ.

ಬಿಜೆಪಿ ಈಗಾಗಲೇ ರಾಮ್‌ದಾಸ್ ಅಠಾವಳೆ, ವಿನೋದ್ ತಾವ್ಡೆ, ಮಾಯಾ ಚಿಂತಾಮನ್ ಇನ್‌ವಾಟೆ ಹಾಗೂ ರಾಮರಾವ್ ಮಾಡ್ಕುಟೆ ಅವರನ್ನು ನಾಮನಿರ್ದೇಶನ ಮಾಡಿದೆ. ಈ ಎಲ್ಲಾ ಅಭ್ಯರ್ಥಿಗಳು ಇಂದು ತಮ್ಮ ನಾಮಪತ್ರಗಳನ್ನು ಸಲ್ಲಿಸಿದ್ದಾರೆ.

ನಾಮಪತ್ರಗಳ ಪರಿಶೀಲನಾ ಕಾರ್ಯ ನಾಳೆ ನಡೆಯಲಿದೆ.

**************

ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರು ಇಂದು ಥಿಂಪುವಿನಲ್ಲಿ ಭೂತಾನ್ ರಾಜ ಜಿಗ್ಮೆ ಖೇಸರ್ ವಾಂಗ್‌ಚುಕ್ ಅವರನ್ನು ಭೇಟಿಯಾಗಿ, ಭೂತಾನ್‌ನಲ್ಲಿ ನ್ಯಾಯಾಂಗ ಪ್ರಕ್ರಿಯೆಗಳ ತಾಂತ್ರಿಕ ನೆರವು ಮತ್ತು ಡಿಜಿಟಲೀಕರಣಕ್ಕೆ ಸಮಗ್ರ ಬೆಂಬಲವನ್ನು ಸೂಚಿಸಿದರು.

ಸಭೆಯಲ್ಲಿ ಭಾರತ ಮತ್ತು ಭೂತಾನ್ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಇದೇ ವೇಳೆ, ಹೆಚ್ಚುತ್ತಿರುವ ಸೈಬರ್ ಅಪರಾಧಗಳನ್ನು ತಡೆಗಟ್ಟಲು ಹಾಗೂ ಆರೋಪಿಗಳನ್ನು ಕಾನೂನು ಕ್ರಮಕ್ಕೆ ಒಳಪಡಿಸಲು ಜಂಟಿ ಪ್ರಯತ್ನಗಳ ಬಗ್ಗೆ ಚರ್ಚಿಸಿದರು.

**************

ಪಶ್ಚಿಮ ಏಷ್ಯಾದಲ್ಲಿ ಹಲವು ದೇಶಗಳು ಸಂಘರ್ಷದಲ್ಲಿ ಭಾಗಿಯಾಗುತ್ತಿರುವುದರಿಂದ ಪರಿಸ್ಥಿತಿ ಮತ್ತಷ್ಟು ವಿಷಮಗೊಳ್ಳುತ್ತಿವೆ. ಇರಾನ್ ವಿರುದ್ಧ ಅಮೆರಿಕಾ ಮತ್ತು ಇಸ್ರೇಲ್ ಜಂಟಿಯಾಗಿ ವಾಯು]ದಾಳಿಗಳನ್ನು ನಡೆಸುತ್ತಿದೆ. ಇದಕ್ಕೆ ಪ್ರತಿಯಾಗಿ ಇರಾನ್, ಕ್ಷಿಪಣಿಗಳು ಮತ್ತು ಡ್ರೋನ್‌ಗಳಿಂದ ದಾಳಿ ನಡೆಸುತ್ತಿದೆ.

ಹಿಜ್ಬೊಲ್ಲಾ ಸೇರಿದಂತೆ ಹಲವು ಸಶಸ್ತ್ರ ಗುಂಪುಗಳು ಇರಾನ್‌ಗೆ ಬೆಂಬಲವಾಗಿ ದಾಳಿಗಳು ನಡೆಸುತ್ತಿವೆ. ಈ ಸಂಘರ್ಷ ಪ್ರಾದೇಶಿಕ ಸ್ಥಿರತೆ ಮತ್ತು ಜಾಗತಿಕ ಭದ್ರತೆಗೆ ಬೆದರಿಕೆಯನ್ನು ಒಡ್ಡುತ್ತಿದ್ದು, ಉದ್ವಿಗ್ನತೆಯನ್ನು ಶಮನಗೊಳಿಸುವಂತೆ ಅನೇಕ ದೇಶಗಳು ಕರೆ ನೀಡಿವೆ.

ಇತ್ತೀಚಿನ ವರದಿಗಳ ಪ್ರಕಾರ, ನಕ್ಚಿವಾನ್ ಹೊರ ವಲಯದಲ್ಲಿ ಇರಾನ್ ಡ್ರೋನ್ ದಾಳಿ ನಡೆಸಿದೆ ಎಂದು ಅಜರ್‌ಬೈಜಾನ್ ಆರೋಪಿಸಿದೆ. ನಕ್ಚಿವಾನ್ ವಿಮಾನ ನಿಲ್ದಾಣದ ಬಳಿ ಹಾಗೂ ಶಾಲೆಯೊಂದರ ಬಳಿ ಡ್ರೋನ್ ದಾಳಿ ನಡೆಸಲಾಗಿದ್ದು, ಘಟನೆಯಲ್ಲಿ ಇಬ್ಬರು ನಾಗರಿಕರು ಗಾಯಗೊಂಡಿದ್ದಾರೆ ಎಂದು ಅಜರ್‌ಬೈಜಾನ್ ವಿದೇಶಾಂಗ ಸಚಿವಾಲಯ ತಿಳಿಸಿದೆ.

**************

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷದ ಪರಿಸ್ಥಿತಿ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯಲ್ ಮ್ಯಾಕ್ರನ್ ಅವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದರು.

ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯ ಆರಂಭಿಕ ಪುನರ್ ಸ್ಥಾಪನೆಗಾಗಿ ಭಾರತ ಮತ್ತು ಫ್ರಾನ್ಸ್ ನಿಕಟವಾಗಿ ತೊಡಗಿಸಿಕೊಳ್ಳುವುದನ್ನು ಮತ್ತು ಸಮನ್ವಯ ಪ್ರಯತ್ನಗಳನ್ನು ಮುಂದುವರೆಸುತ್ತವೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

**************

ಪಶ್ಚಿಮ ಏಷ್ಯದಲ್ಲಿ ನಡೆಯುತ್ತಿರುವ ಸಂಘರ್ಷದ ಕುರಿತು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಇಂದು ಇರಾನ್ ವಿದೇಶಾಂಗ ಸಚಿವ ಸೈಯದ್ ಅಬ್ಬಾಸ್ ಅರಗ್ಚಿ ಮತ್ತು ಒಮನ್ ವಿದೇಶಾಂಗ ಸಚಿವ ಸೈಯದ್ ಬದ್ರ ಬಿನ್ ಹಮೂದ್ ಅಲ್‌ಬುಸೈದಿ ಅವರೊಂದಿಗೆ ಪ್ರತ್ಯೇಕವಾಗಿ ದೂರವಾಣಿ ಕರೆ ಮಾಡಿ ಮಾತುಕತೆ ನಡೆಸಿದರು.

**************

ಪಶ್ಚಿಮ ಏಷ್ಯಾದಲ್ಲಿ ಸಂಘರ್ಷದ ಹಿನ್ನೆಲೆಯಲ್ಲಿ ಯುಎಇ ಯಲ್ಲಿರುವ ಎಲ್ಲಾ ಭಾರತೀಯ ಪ್ರಜೆಗಳು ಜಾಗರೂಕರಾಗಿ, ಶಾಂತವಾಗಿರಲು ಹಾಗೂ ಯುಎಇ ಅಧಿಕಾರಿಗಳ ಸುರಕ್ಷತಾ ಮಾರ್ಗಸೂಚಿಗಳನ್ನು ಪಾಲಿಸಲು ಮತ್ತು ಅಧಿಕೃತ ಸಲಹೆಗಳನ್ನು ಅನುಸರಿಸಲು ಅಬುಧಾಬಿಯಲ್ಲಿರುವ ಭಾರತೀಯ ರಾಯಭಾರ ಕಚೇರಿ ಸೂಚಿಸಿದೆ.

ವಾಯುಪ್ರದೇಶ ಮತ್ತು ನಿಯಮಿತ ನಿಗದಿತ ವಿಮಾನ ಕಾರ್ಯಾಚರಣೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಫೆಬ್ರವರಿ ೨೮ ರ ನಂತರ ಸಿಲುಕಿಕೊಂಡಿರುವ ಮತ್ತು ವೀಸಾ ಅವಧಿ ಮುಗಿದಿರುವವರಿಗೆ, ಯುಎಇ ಫೆಡರಲ್ ಅಥಾರಿಟಿ ಫಾರ್ ಐಡೆಂಟಿಟಿ, ಸಿಟಿಜನ್‌ಶಿಪ್, ಕಸ್ಟಮ್ಸ್ ಮತ್ತು ಬಂದರು ಪ್ರಾಧಿಕಾರ, ಈ ಸಂದರ್ಭಗಳಲ್ಲಿ ಹೊರಡಲು ಸಾಧ್ಯವಾಗದ ಪ್ರಯಾಣಿಕರಿಗೆ ದಂಡವನ್ನು ಮನ್ನಾ ಮಾಡುವುದಾಗಿ ಘೋಷಿಸಿದೆ.

ಅಬುಧಾಬಿಯಲ್ಲಿರುವ ಭಾರತೀಯ ರಾಯಭಾರ ಕಚೇರಿ ಮತ್ತು ದುಬೈನಲ್ಲಿರುವ ದೂತಾವಾಸ ಕಚೇರಿ ಸಾಮಾನ್ಯವಾಗಿ ಕಾರ್ಯನಿರ್ವಹಿಸುತ್ತಿವೆ. ಸಹಾಯಕ್ಕಾಗಿ ಯುಎಇಯಲ್ಲಿರುವ ಭಾರತೀಯ ಪ್ರಜೆಗಳು ದಿನದ ೨೪ ಗಂಟೆ ಕಾರ್ಯನಿರ್ವಹಿಸುವ ಟೋಲ್-ಫ್ರೀ ಸಂಖ್ಯೆ: ೮೦೦-೪೬೩೪೨, +೯೭೧ ೫೪೩೦೯೦೫೭೧ ಮತ್ತು pbsk.dubai@mea.gov.in ca.abudhabi@mea.gov.in ಗೆ ಇಮೇಲ್ ಮೂಲಕ ಸಂಪರ್ಕಿಸಬಹುದು.

**************

ಮುಂಬೈನ ವಾಂಖೇಡೆ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಭಾರತ-ಇಂಗ್ಲೆಂಡ್ ಮುಖಾಮುಖಿಯಾಗಿದ್ದು, ಟಾಸ್ ಗೆದ್ದ ಇಂಗ್ಲೆಂಡ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ, ಇತ್ತೀಚಿನ ವರದಿ ಬಂದಾಗ ೯ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೧೧೨ ರನ್ ಗಳಿಸಿ ಆಡುತ್ತಿದೆ.

**************

೨೦೨೬ರ ಏಷ್ಯನ್ ಕ್ರೀಡಾಕೂಟಕ್ಕೆ ಭಾರತದ ಸಿದ್ಧತೆಗಳನ್ನು ಕೇಂದ್ರ ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವೀಯ ಇಂದು ಪರಿಶೀಲಿಸಿದರು.

ಈ ವರ್ಷದ ಕ್ರೀಡಾಕೂಟಗಳು ಸೆಪ್ಟೆಂಬರ್ ೧೯ ರಿಂದ ಅಕ್ಟೋಬರ್ ೪ ರವರೆಗೆ ಜಪಾನ್‌ನ ಐಚಿನ್ ನಗೋಯಾದಲ್ಲಿ ನಡೆಯಲಿವೆ.

ನವದೆಹಲಿಯಲ್ಲಿ ನಡೆದ ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಡಾ.ಮನ್ಸುಖ್ ಮಾಂಡವೀಯ, ಈ ವರ್ಷದ ಕ್ರೀಡಾಕೂಟದಲ್ಲಿ ೪೦ಕ್ಕೂ ಹೆಚ್ಚು ವಿಭಾಗಗಳಲ್ಲಿ ೭೦೦ಕ್ಕೂ ಹೆಚ್ಚು ಭಾರತೀಯ ಕ್ರೀಡಾಪಟುಗಳು ಸ್ಪರ್ಧಿಸುವ ನಿರೀಕ್ಷೆ ಇದೆ ಎಂದು ಮಾಹಿತಿ ನೀಡಿದರು.

ಏಷ್ಯನ್ ಕ್ರೀಡಾಕೂಟದಲ್ಲಿ ಸ್ಪರ್ಧಿಸುವ ಕ್ರೀಡಾಪಟುಗಳಿಗೆ ತರಬೇತಿ ಸೇರಿದಂತೆ ಅಗತ್ಯ ಬೆಂಬಲ ನೀಡುವುದಾಗಿ ಅವರು ತಿಳಿಸಿದರು.

*******ಮುಕ್ತಾಯ*******